ಆಂಗ್ಲೋ ಇಂಡಿಯನ್ ಜನಾಂಗದ ವಿದ್ಯಾರ್ಥಿಗಳಿಗೆ ಸೌಲಭ್ಯ.

1082. ಶ್ರೀ ಡೆರಿಕ್ ಎಂ. ಬಿ. ಪುಲಿನ್‌ಪಾ (ನಾಮನಿರ್ದೇಶನ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ –

ಅ) ಆಂಗ್ಲೋ ಇಂಡಿಯನ್ ಜನಾಂಗದವರಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಮೂಲಕ ವಾರ್ಷಿಕ ಆದಾಯ ರೂ. 6,000 ಗಳಿಗೆ ಕಡಿಮೆ ಇದ್ದಲ್ಲಿ ಶೈಕ್ಷಣಿಕ ಮತ್ತು ಉದ್ಯೋಗ ಸೌಲಭ್ಯಗಳನ್ನು ನೀಡುತ್ತಿರುವುದಾಗಿ ಕಳೆದ ಅಧಿವೇಶನದಲ್ಲಿ ಹೇಳಿಕೆ ನೀಡಿರುವುದು ನಿಜವೇ ;

ಆ) ಈ ಆದಾಯ ಮಿತಿಯಿಂದಾಗಿ ಬಹಳಷ್ಟು ಕುಟುಂಬಗಳು ಈ ಸೌಲಭ್ಯಗಳನ್ನು ಪಡೆಯುವಲ್ಲಿ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ, ಆಂಗ್ಲೋ ಇಂಡಿಯನ್ ಜನಾಂಗದವರನ್ನು ಮೇಲೆತ್ತಲು ಏನಾದರೂ ಬದಲೀ ವ್ಯವಸ್ಥೆಯನ್ನು ಮಾಡಲಾಗಿದೆಯೇ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು) –

ಅ) ಆಂಗ್ಲೋ ಇಂಡಿಯನ್ ಜನಾಂಗದವರಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಮೂಲಕ ವಾರ್ಷಿಕ ಆದಾಯ ರೂ. 6,000–00 ಗಳಿಗೆ ಕಡಿಮೆ ಇದ್ದಲ್ಲಿ ಉದ್ಯೋಗ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಎಂದು ಹೇಳಿರುವುದು ನಿಜ.

ಆ) ಹೌದು

ಇ) ಇಂಥ ಫಲಾನುಭವಿಗಳ ಆದಾಯ ಮಿತಿಯನ್ನು ಹೆಚ್ಚಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಉಪಾಧ್ಯಕ್ಷೀಣಿಯವರು - ಸದನದ ಮುಂದೆ ಮಂಡಿಸಲಾಗಿದೆ.

ಸಭೆಯ ಮುಂದಿಡಲಾದ ಕಾಗದ ಪತ್ರಗಳು.

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಯವರು) :- ಮಾನ್ಯ ಉಪಾಧ್ಯಕ್ಷೀಣಿಯವರೆ, ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಈ ಕೆಳಕಂಡ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸಬಯಸುತ್ತೇನೆ.

1) 1988 – 89 ನೇ ಸಾಲಿನ ಧನ ವಿನಿಯೋಗ ಲೆಕ್ಕಪತ್ರಗಳು.
2) 1988 –89 ನೇ ಸಾಲಿನ ಹಣಕಾಸು ಲೆಕ್ಕಪತ್ರಗಳು ಹಾಗೂ
3) 1989ನೇ ಇಸವಿಯ ಮಾರ್ಚ್ 31ರಂದು ಕೊನೆಗೊಂಡ ವಾರ್ಷಿಕದ ಬಗ್ಗೆ ನಿಯಂತ್ರಕ ಹಾಗೂ ಮಹಾಲೇಖ ಪರೀಕ್ಷಕರವರ ವರದಿ (ನಂ.3 ಸಿವಿಲ್)

ಉಪಾಧ್ಯಕ್ಷೀಣಿಯವರು - ಕಾಗದ ಪತ್ರಗಳನ್ನು ಮಂಡಿಸಲಾಯಿತು.

ವರದಿಯನ್ನೊಪ್ಪಿಸುವುದು.

ಉಪಾಧ್ಯಕ್ಷೀಣಿಯವರು :- ಖಾಸಗೀ ಸದಸ್ಯರ ವಿಧೇಯಕಗಳು ಮತ್ತು ನಿರ್ಣಯಗಳಿಗೆ ಸಂಬಂಧಿಸಿದ ಸಮಿತಿಯ 2ನೇ ವರದಿಯನ್ನು ಸಭೆಯ ಮುಂದಿಡುತ್ತಿದ್ದೇನೆ.

ನಿಯಮ 334 ರ ಮೇರೆಗೆ

1 ಮುಳವಾಡ ಏತನೀರಾವರಿ ಯೋಜನೆ :-

ಶ್ರೀ. ಎಂ.ಬಿ. ಪಾಟೀಲ್ (ತ್ರಿಕೋಟಾ) - 1. ಮುಳವಾಡ ಏತ ನೀರಾವರಿ ಯೋಜನೆ ಬಗ್ಗೆ ಪತ್ರಿಕಾ ಹೇಳಿಕೆಗಳು ಮತ್ತು ಇತ್ತೀಚೆಗೆ ಮಠಾಧೀಶರೊಬ್ಬರು ಜನಾಂಧೋಲನ ಪ್ರಾರಂಭಿಸಿ, ನಿರಶನ ಕಾರ್ಯಕ್ರಮ ಕೈಗೊಂಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೆ ;